ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಸರ್ಕಾರಿ ಪದವಿ ಕಾಲೇಜು ಮತ್ತು ವಿಶ್ವ ವಿದ್ಯಾನಿಲಯಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆ ಭರ್ತಿ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-

792 (974) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಪದವಿ ಕಾಲೇಜು ಮತ್ತು ವಿಶ್ವವಿದ್ಯಾನಿಲಯಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ವಿಷಯವಾರು ವಿವರ ನೀಡುವುದು)

(ಆ) ಸದರಿ ಹುದ್ದೆಗಳನ್ನು ದೀರ್ಘಕಾಲದಿಂದ ತುಂಬದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ದೀರ್ಘಕಾಲದಿಂದ ಭರ್ತಿ ಮಾಡದಿರಲು ಕಾರಣಗಳೇನು ;

(ಇ) ಸದರಿ ಹುದ್ದೆಗಳನ್ನು ಭರ್ತಿ ಮಾಡುವಲ್ಲಿ ಅನುಸರಿಸಲಾಗುತ್ತಿರುವ ಮಾನದಂಡಗಳಾವುವು ; (ವಿವರ ನೀಡುವುದು)

(ಈ) ಯಾವ ಕಾಲಮಿತಿಯಲ್ಲಿ ಸದರಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು?